# ಕರ್ನಾಟಕ ಸರ್ಕಾರ

ನಂ.ಗ್ರಾಅಪ/09/ಗ್ರಾಪಂಅ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:16-04-2016

**ಸುತ್ತೋಲೆ-2**

**ವಿಷಯ:** ಗ್ರಾಮ ಪಂಚಾಯತಿಗಳು ಮೊಬೈಲ್ ಟವರ್ ಸ್ಥಾಪಿಸಲು ಮತ್ತು ಜಾಹೀರಾತು ಹಾಗೂ ಜಾಹೀರಾತು ಫಲಕಗಳನ್ನು ನಿಲ್ಲಿಸಲು ಅನುಮತಿ ನೀಡಲು ಹಾಗೂ ತೆರಿಗೆ ವಿಧಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 45 ಶಾಸನ 2015, ದಿನಾಂಕ: 31-12-2015.
2. ಸರ್ಕಾರದ ಅಧಿಸೂಚನೆ ಸಂಖ್ಯೆ 2 :ಗ್ರಾಅಪ 788 ಗ್ರಾಪಂಅ. 2014, ದಿನಾಂಕ:08-05-2015.
3. **ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 09 ಗ್ರಾಪಂಅ 2016 ದಿನಾಂಕ:25-02-2016.**

*****

ಕರ್ನಾಟಕ ಪಂಚಾಯತ್ ರಾಜ್ (2ನೇ ತಿದ್ದುಪಡಿ) ಅಧಿನಿಯಮ, 2015 ದಿನಾಂಕ:25-02-2016 ರಿಂದ ಜಾರಿಗೆ ಬಂದಿದ್ದು, ಅದರಂತೆ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳು ಕ್ರಮವಹಿಸುವಂತೆ ಈಗಾಗಲೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಕರ್ನಾಟಕ ಪಂಚಾಯತ್ ರಾಜ್ (2ನೇ ತಿದ್ದುಪಡಿ) ಅಧಿನಿಯಮ, 2015ರ ಪ್ರಕರಣ ಪ್ರಕರಣ 64 ಮತ್ತು ಕರ್ನಾಟಕ ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಾಣದ ಮೇಲೆ ಜಿಲ್ಲಾ ಪಂಚಾಯತಿಗಳ, ತಾಲ್ಲೂಕು ಪಂಚಾಯತಿಗಳು ಮತ್ತು ಗ್ರಾಮ ಪಂಚಾಯತಿಗಳ ನಿಯಂತ್ರಣ) ಮಾದರಿ ಉಪವಿಧಿಗಳು 2015 ರನ್ವಯ ಗ್ರಾಮ ಪಂಚಾಯತಿಯಿಂದ ಬರಹದ ಅನುಮತಿಯಿಲ್ಲದೆ ಯಾವುದೇ ಕಟ್ಟಡವನ್ನು ನಿರ್ಮಿಸಲು ಅಥವಾ ಅಸ್ತಿತ್ವದಲ್ಲಿರುವ ಯಾವುದೇ ಕಟ್ಟಡವನ್ನು ಬದಲಾಯಿಸಲು ಅಥವಾ ಅದಕ್ಕೆ ಸೇರ್ಪಡೆ ಮಾಡಲು ಅಥವಾ ಕಟ್ಟಡವನ್ನು ಪುನರ್ ನಿರ್ಮಿಸಲು ಅವಕಾಶವಿರುವುದಿಲ್ಲ. ಜಾಹೀರಾತು ಫಲಕಗಳನ್ನು ನಿಲ್ಲಿಸಲು ಅಥವಾ ಆವರಣಗಳ ಒಳಗೆ ಖಾಲಿ ಇರುವ ಯಾವುದೇ ಜಾಗದಲ್ಲಿ ಅಥವಾ ಆ ಸ್ಥಳಕ್ಕೆ ಹೊಂದಿಕೊಂಡಿರುವ ಮೊಬೈಲ್ ಟವರ್‌ಗಳನ್ನು ಸ್ಥಾಪಿಸಲು ಗ್ರಾಮ ಪಂಚಾಯತಿಯಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ.

ಕರ್ನಾಟಕ ಪಂಚಾಯತ್ ರಾಜ್ (2ನೇ ತಿದ್ದುಪಡಿ) ಅಧಿನಿಯಮ, 2015ರ **ಅನುಸೂಚಿ-IV ರಲ್ಲಿ ಗ್ರಾಮ ಪಂಚಾಯತಿಗಳು ವಾರ್ಷಿಕ ಎಲ್ಲಾ ರೀತಿಯ ಪ್ರತಿ ಮೊಬೈಲ್ ಟವರ್‌ಗಳ ಮೇಲೆ ರೂ.12,000/- ತೆರಿಗೆ ವಿಧಿಸಲು** ಮತ್ತು ಜಾಹೀರಾತುಗಳು ಹಾಗೂ ಹೋರ್ಡಿಂಗ್‌ಗಳ ಮೇಲೆ ಪ್ರತಿ ಚದರ ಮೀಟರ್‌ಗೆ ಅಥವಾ ಅದರ ಭಾಗಕ್ಕೆ ತಿಂಗಳೊಂದಕ್ಕೆ 5.00 ರೂಪಾಯಿಗಳು ತೆರಿಗೆ ವಿಧಿಸಲು **ಅವಕಾಶ** ಕಲ್ಪಿಸಲಾಗಿದೆ.

ಮೇಲ್ಕಂಡಂತೆ ವಿವರಿಸಿರುವಂತೆ ಗ್ರಾಮ ಪಂಚಾಯತಿಗಳು ಮೊಬೈಲ್ ಟವರ್ ಸ್ಥಾಪಿಸಲು ಮತ್ತು ಜಾಹೀರಾತು ಹಾಗೂ ಜಾಹೀರಾತು ಫಲಕಗಳನ್ನು ನಿಲ್ಲಿಸಲು ಅನುಮತಿ ನೀಡಲು ಹಾಗೂ ತೆರಿಗೆ ವಿಧಿಸುವ ಬಗ್ಗೆ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ತಿಳಿಸಿದೆ.

(ಕೆ. ಯಾಲಕ್ಕಿಗೌಡ) 04/5/16
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.